**All India Radio: Bangalore**
**Regional Bulletin In Kannada**
**03.03.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.03.2025 / 2.30 p.m.**

**<><><><>**

ಮುಖ್ಯಾಂಶಗಳು

1. ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಕೋಮು ಹಿಂಸಾಚಾರ ವಿರೋಧಿ ಕಾರ್ಯಪಡೆ - ಗೃಹ ಸಚಿವ ಡಾ. ಜಿ. ಪರಮೇಶ್ವರ್
2. ರಾಜ್ಯ ರೈತರ ಹಿತ ಕಾಪಾಡಲು ಸರ್ಕಾರ ಬದ್ಧ ; ಕೃಷ್ಣಾ ನ್ಯಾಯಾಧೀಕರಣ ಕುರಿತ ಸಭೆಯಲ್ಲಿ ಮುಖ್ಯಮಂತ್ರಿ ಸ್ಪಷ್ಟನೆ
3. ನಾಳೆ ದೇಶಾದ್ಯಂತ ನೀಟ್ - ಯುಜಿ ಪರೀಕ್ಷೆ ; ರಾಜ್ಯದ ೩೮೧ ಪರೀಕ್ಷಾ ಕೇಂದ್ರಗಳಲ್ಲಿ ಬಿಗಿಭದ್ರತೆ
4. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಇಂದು ಗುಡುಗು-ಮಿಂಚು, ಬಿರುಗಾಳಿ ಸಹಿತ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ
5. ಐಪಿಎಲ್ ಟಿ-೨೦ ಕ್ರಿಕೆಟ್ ; ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

<><><><>

ದಕ್ಷಿಣಕನ್ನಡದಲ್ಲಿ ನಡೆದ ಸುಹಾಸ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ೮ ಮಂದಿಯನ್ನು ಬಂಧಿಸಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿಂದು ಪೊಲೀಸ್ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಗೃಹಸಚಿವರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಕೋಮು ಹಿಂಸಾಚಾರ ವಿರೋಧಿ ಕಾರ್ಯಪಡೆ ರಚಿಸುವುದಾಗಿ ಘೋಷಿಸಿದ್ದಾರೆ. ಐಜಿ ಮಟ್ಟದ ಅಧಿಕಾರಿ ಇದರ ನೇತೃತ್ವ ವಹಿಸಲಿದ್ದಾರೆ ಎಂದು ಹೇಳಿದ್ದಾರೆ. ಇದೇ ವೇಳೆ ಪ್ರಚೋದನಾಕಾರಿ ಹೇಳಿಕೆ ನೀಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ಗುಂಪು ಹತ್ಯೆ ಪ್ರಕರಣದಲ್ಲಿ ಈಗಾಗಲೇ ೨೧ ಮಂದಿ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಜಿಲ್ಲೆಯಲ್ಲಿ ಇನ್ನು ಮುಂದೆ ಇಂತಹ ಘಟನೆಗಳು ನಡೆಯಬಾರದು. ಯಾವುದೇ ಕಾರಣಕ್ಕೂ ಕರಾವಳಿ ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಹಾಳು ಮಾಡಲು ಬಿಡುವುದಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ಎಚ್ಚರಿಕೆ ನೀಡಿದ್ದಾರೆ.

**ಧ್ವನಿ : ಡಾ. ಜಿ. ಪರಮೇಶ್ವರ್ (೩೪ ಸೆಕೆಂಡ್‌ಗಳು)**

<><><><>

ಕೃಷ್ಣ ನ್ಯಾಯಾಧೀಕರಣ - ೨ರ ಗೆಜೆಟ್ ಅಧಿಸೂಚನೆ ಕುರಿತು ಚರ್ಚಿಸಲು ಕೇಂದ್ರ ಜಲಶಕ್ತಿ ಸಚಿವರು ಕರೆದಿರುವ ಕಣಿವೆ ರಾಜ್ಯಗಳ ಜಲಸಂಪನ್ಮೂಲ ಸಚಿವರ ಸಭೆಗೆ ಪೂರ್ವಭಾವಿಯಾಗಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಉನ್ನತ ಮಟ್ಟದ ಸಭೆ ನಡೆಸಿದರು. ಈ ವೇಳೆ ರಾಜ್ಯದ ರೈತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ರಾಜ್ಯದ ಪಾಲಿನ ನೀರನ್ನು ಪಡೆದುಕೊಳ್ಳಲು ಕಾನೂನು ಕ್ರಮಗಳು ಸೇರಿದಂತೆ ಎಲ್ಲ ಪ್ರಯತ್ನ ನಡೆಸುವಂತೆ ಸಭೆಯಲ್ಲಿ ಸೂಚನೆ ನೀಡಿದ್ದಾರೆ. ಶೀಘ್ರದಲ್ಲಿಯೇ ಕೃಷ್ಣ ಜಲವಿವಾದ ನ್ಯಾಯಮಂಡಳಿಯ ಅಂತಿಮ ತೀರ್ಪಿನ ಅನುಷ್ಠಾನ ಕುರಿತು ಸರ್ವಪಕ್ಷ ಸಭೆ ಕರೆಯಲಾಗುವುದು ಎಂದು ಹೇಳಿದ್ದಾರೆ. ಸಭೆಯಲ್ಲಿ ಸುಪ್ರೀಂಕೋರ್ಟ್ ಆದೇಶವನ್ನು ಮಾರ್ಪಡಿಸಲು ಕೋರಿ ನ್ಯಾಯಾಲಯದಲ್ಲಿ ಅರ್ಜಿ ದಾಖಲಿಸಲು ಕೇಂದ್ರ ಸರ್ಕಾರಕ್ಕೆ ಒತ್ತಡ ಹೇರಲು ನಿರ್ಧರಿಸಲಾಯಿತು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಚ್.ಕೆ. ಪಾಟೀಲ್, ಎಂ.ಬಿ. ಪಾಟೀಲ್, ಮಹದೇವಪ್ಪ, ಹಿರಿಯ ನ್ಯಾಯವಾದಿ ಮೋಹನ್ ಕಾತರಕಿ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

<><><>

ನಾಳೆ ದೇಶಾದ್ಯಂತ ನೀಟ್ - ಯುಜಿ ಪರೀಕ್ಷೆ ನಡೆಯಲಿದೆ. ಅಭ್ಯರ್ಥಿಗಳಿಗೆ ಈಗಾಗಲೇ ಡ್ರೆಸ್‌ಕೋಡ್ ಸಹಿತ ಪ್ರಮುಖ ಸೂಚನೆಗಳನ್ನು ಪಾಲಿಸುವಂತೆ ತಿಳಿಸಲಾಗಿದೆ. ರಾಜ್ಯದ ಬೆಂಗಳೂರು, ಮೈಸೂರು, ಮಂಗಳೂರು, ಬೆಳಗಾವಿ, ಕಲಬುರಗಿ, ಧಾರವಾಡ, ಮಂಡ್ಯ ಸೇರಿದಂತೆ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ರಾಜ್ಯದ ೩೮೧ ಪರೀಕ್ಷಾ ಕೇಂದ್ರಗಳಲ್ಲಿ ಒಂದು ಲಕ್ಷ ೪೯ ಸಾವಿರದ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಮಧ್ಯಾಹ್ನ ೨ ರಿಂದ ಸಂಜೆ ೫ ರವರೆಗೆ ಪರೀಕ್ಷೆ ನಡೆಯಲಿದ್ದು, ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ೧.೩೦ರೊಳಗೆ ಹಾಜರಿರುವಂತೆ ಸೂಚಿಸಲಾಗಿದೆ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಕಡ್ಡಾಯವಾಗಿರಲಿದೆ. ಅಭ್ಯರ್ಥಿಗಳು ಪೂರ್ಣತೋಳಿರುವ ಮೇಲಂಗಿಯನ್ನು ಹಾಗೂ ದೊಡ್ಡ ಬಟನ್‌ಗಳಿರುವ ಶರ್ಟ್, ಕಿವಿಓಲೆ, ಬಳೆ, ಮೂಗುತಿ ಸೇರಿದಂತೆ ಯಾವುದೇ ಮೆಟಲ್ ಉಪಕರಣಗಳನ್ನು ಧರಿಸುವಂತಿಲ್ಲ.

<><><>

ರಾಜ್ಯ ಸರ್ಕಾರ ಎರಡು ವರ್ಷ ಯಶಸ್ವಿ ಪೂರ್ಣಗೊಳಿಸಿರುವ ಹಿನ್ನಲೆಯಲ್ಲಿ ಇದೇ ೨೦ ರಂದು ಹೊಸಪೇಟೆಯಲ್ಲಿ ಸರ್ಕಾರದ ಎರಡು ವರ್ಷದ ಸಾಧನಾ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ವಕ್ಫ್ ಮತ್ತು ವಸತಿ, ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ತಿಳಿಸಿದ್ದಾರೆ. ಸಮಾವೇಶದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು, ಶಾಸಕರು ಭಾಗವಹಿಸಲಿದ್ದಾರೆ. ಸಮಾವೇಶದಲ್ಲಿ ಹಕ್ಕು ಪತ್ರ ವಿತರಣಾ ಕಾರ್ಯಕ್ರಮ ನಡೆಯಲಿದ್ದು, ಫಲಾನುಭವಿಗಳು ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗವಹಿಸಲಿದ್ದಾರೆ. ಜಿಲ್ಲಾಡಳಿತ ಸೂಕ್ತ ಭದ್ರತೆ ಒದಗಿಸಬೇಕೆಂದು  ಜಮೀರ್ ಅಹಮ್ಮದ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಎರಡು ದಿನಗಳ ಕಾಲ ನಡೆಯುವ ಹಲಸು ಮೇಳಕ್ಕೆ ಚಾಲನೆ ದೊರೆತಿದೆ. ಮೈಸೂರಿನ ನಂಜರಾಜ ಬಹಾದ್ದೂರ್ ಸಭಾಂಗಣದಲ್ಲಿ ಆಯೋಜಿಸಿದ್ದ ಹಲಸು ಮೇಳಕ್ಕೆ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ, ಹಲಸು ಬೆಳೆಗಾರ ಕೃಷ್ಣಮೂರ್ತಿ ಬಿಳಿಗೆರೆ ಹಲಸಿನ ಹಣ್ಣು ಕತ್ತರಿಸುವ ಮೂಲಕ ಚಾಲನೆ ನೀಡಿದರು. ಹಲಸಿನ ಹಬ್ಬದಲ್ಲಿ ಮೈಸೂರು ಜಿಲ್ಲೆ ಸೇರಿದಂತೆ ವಿವಿಧ ಕಡೆಗಳಿಂದ ರೈತರು, ಹಲಸು ಮಾವು ಬೆಳೆಯುವ ರೈತರುಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದಾರೆ.

<><><>

ದಾವಣಗೆರೆ ಜಿಲ್ಲಾದ್ಯಂತ ಕಳೆದ ರಾತ್ರಿ ವ್ಯಾಪಕ ಮಳೆಯಾಗಿದ್ದು, ಕೊಯ್ಲಿಗೆ ಬಂದಿದ್ದ ಭತ್ತ ಮತ್ತು ತರಕಾರಿ ಬೆಳೆಗೆ ಹಾನಿ ಸಂಭವಿಸಿದೆ. ಬಿರುಗಾಳಿಯ ರಭಸಕ್ಕೆ  ಮರಗಳು  ನೆಲಕ್ಕುರುಳಿದ್ದು,  ಹಲವೆಡೆ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಗ್ರಾಮೀಣ ಭಾಗದಲ್ಲಿ ಮುಂಗಾರು ಪೂರ್ವ ಮಳೆ ಉತ್ತಮವಾಗಿ ಸುರಿದಿದ್ದು, ಬಿತ್ತನೆಗಾಗಿ ಭೂಮಿ ಹದಗೊಳಿಸುವ ಕಾರ್ಯ ಬರದಿಂದ ನಡೆಯುತ್ತಿದೆ.

<><><>

ರಾಜ್ಯದ ವಿವಿಧೆಡೆ ಮಳೆಯಾಗಿದ್ದು, ದಾವಣಗೆರೆ ಹೊನ್ನಾಳಿಯಲ್ಲಿ ೯ ಸೆಂಟಿ ಮೀಟರ್ ಮಳೆಯಾಗಿದೆ. ಬೆಂಗಳೂರಿನಲ್ಲಿ ೫ ಸೆಂಟಿ ಮೀಟರ್ ಮಳೆಯಾಗಿದೆ. ಬೆಂಗಳೂರಿನಲ್ಲಿ ಗರಿಷ್ಠ ಉಷ್ಣಾಂಶ ೩೩ ಡಿಗ್ರಿ ಸೆಲ್ಸಿಯೆಸ್ ದಾಖಲಾಗಿದೆ. ಬೆಂಗಳೂರಿನಲ್ಲಿ ಮುಂದಿನ ೨ ದಿನಗಳ ಕಾಲ ಸಂಜೆ ಹಾಗೂ ರಾತ್ರಿ ವೇಳೆಗೆ ಗುಡುಗು-ಮಿಂಚು, ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ. ಸಿ.ಎಸ್. ಪಾಟೀಲ್ (೩೨ ಸೆಕೆಂಡ್‌ಗಳು)**

ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಇಂದಿನಿಂದ ಮುಂದಿನ ೫ ದಿನಗಳ ಕಾಲ ಗುಡುಗು, ಮಿಂಚು, ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಮುನ್ಸೂಚನೆ ನೀಡಿದ್ದಾರೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಈಗಾಗಲೇ ಟೂರ್ನಿಯಲ್ಲಿ ೭ ಗೆಲುವು ದಾಖಲಿಸುವುದರೊಂದಿಗೆ ಆರ್‌ಸಿಬಿ ಪ್ಲೇ ಆಫ್‌ಗೆ ಅರ್ಹತೆ ಪಡೆಯುವ ಸಮೀಪದಲ್ಲಿದೆ. ಆಡಿರುವ ಹತ್ತು ಪಂದ್ಯಗಳಲ್ಲಿ ೮ ಪಂದ್ಯಗಳನ್ನು ಸೋತಿರುವ ಚೆನ್ನೈ ಸೂಪರ್ ಕಿಂಗ್ಸ್ ಪಂದ್ಯಾವಳಿಯಿಂದ ಅಧಿಕೃತವಾಗಿ ಹೊರ ಬಿದ್ದಿದ್ದು, ಇಂದಿನ ಪಂದ್ಯ ಔಪಚಾರಿಕವಾಗಿದೆ.

<><><><>

ಮುಂಬೈನಲ್ಲಿ ನಡೆಯುತ್ತಿರುವ ವಿಶ್ವ ಆಡಿಯೋ ದೃಶ್ಯ ಮತ್ತು ಮನರಂಜನಾ ಶೃಂಗಸಭೆ ವೇವ್ಸ್-೨೦೨೫ ರ ಮೂರನೇ ದಿನವಾದ ಇಂದು ಸಮುದಾಯ ರೇಡಿಯೋ ಕುರಿತ ರಾಷ್ಟ್ರೀಯ ಸಮ್ಮೇಳನ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ನಡೆಯುವ ಚರ್ಚೆಗಳು ಜನರನ್ನು ಸಬಲೀಕರಣಗೊಳಿಸುವ ಮತ್ತು ಸ್ಥಳೀಯ ಸಮುದಾಯದೊಂದಿಗೆ ಹೆಚ್ಚು ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಇತ್ತೀಚಿನ ನೀತಿಗಳು ಮತ್ತು ಕಾರ್ಯಕ್ರಮಗಳ ಮೇಲೆ ಕೇಂದ್ರೀಕರಿಸುತ್ತವೆ. ಸಮುದಾಯ ರೇಡಿಯೋ ಕೇಂದ್ರಗಳು ಸಂಪರ್ಕ ಸಾಧಿಸಲು ಮತ್ತು ಉತ್ತಮ ಅಭ್ಯಾಸಗಳನ್ನು ಹಂಚಿಕೊಳ್ಳಲು ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಭಾರತೀಯ ಸಮೂಹ ಸಂವಹನ ಸಂಸ್ಥೆ ಸಹಯೋಗದೊಂದಿಗೆ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಈ ಕಾರ್ಯಕ್ರಮವನ್ನು ಆಯೋಜಿಸುತ್ತಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ದಕ್ಷಿಣ ಕಾಶಿ ಪಂಚನಂದಿ ಮಹಾಪುಣ್ಯ ಕ್ಷೇತ್ರವೆಂದು ಹೆಸರಾದ ಚಿಕ್ಕಬಳ್ಳಾಪುರ ತಾಲ್ಲೂಕಿನ ಪಾಪಾಘ್ನಿ ಮಠದಲ್ಲಿ ಇದೇ ೭ ರಂದು ಕಾಲಜ್ಞಾನಿ ಶ್ರೀ ವೀರಬ್ರಹ್ಮೇಂದ್ರ ಸ್ವಾಮಿಯವರ ೩೩೨ ನೇ ಆರಾಧನಾ ಮಹೋತ್ಸವ ನೆರವೇರಲಿದೆ.
2. ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದ ಪೀಠದಲ್ಲಿ ಇಂದು ಶಂಕರಚಾರ್ಯ ಜಾತ್ರ ಮಹೋತ್ಸವ ನಡೆಯಿತು. ಮಠದ ಕಿರಿಯ ಜಗದ್ಗುರುಗಳಾದ ಶ್ರೀ ವಿಧುಶೇಖರತೀರ್ಥ ಸ್ವಾಮೀಜಿ ಜಾತ್ರ ಮಹೋತ್ಸವದಲ್ಲಿ ಪಾಲ್ಗೊಂಡಿದ್ದರು.
3. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಾಲ್ಕು ಪರೀಕ್ಷಾ ಕೇಂದ್ರಗಳಲ್ಲಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ- ನೀಟ್ ನಾಳೆ ನಡೆಯುತ್ತಿದ್ದು ಪರೀಕ್ಷೆ ನಡೆಸಲು ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>